# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:14ನೇ ಡಿಸೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಶ್ರೀ ಬಸವರಾಜ ಬೊಮ್ಮಾಯಿ** (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ 2020-2021ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

### 03. ವರದಿಗಳನ್ನೊಪ್ಪಿಸುವುದು

**ಡಾ: ಕೆ. ಗೋವಿಂದರಾಜು (ಸದಸ್ಯರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ)** ಅವರು 2020-21ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದ 05ನೇ ವರದಿ, ಉನ್ನತ ಶಿಕ್ಷಣ ಇಲಾಖೆಗೆ ಸಂಬಂಧಿಸಿದ 06ನೇ ವರದಿ ಮತ್ತು ಕಂದಾಯ ಇಲಾಖೆಗೆ ಸಂಬಂಧಿಸಿದ 7ನೇ ವರದಿಗಳನ್ನೊಪಿಸುವುದು.

### 04. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

ಅ) **ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣವನ್ನು ಅವ್ಯವಹಾರ ಮಾಡಿರುವ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 6 ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

..2..

ಆ) **ಶ್ರೀ ಎನ್ ರವಿಕುಮಾರ್ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:-**

ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ರಚಿಸಲಾಗಿರುವ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 6 ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಬಿ.ಎಂ.ಫಾರೂಕ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಮುದಿಪು ಪಜಿರು ಗ್ರಾಮದ 500ಕ್ಕೂ ಹೆಚ್ಚು ರೈತರ ಜಮೀನುಗಳನ್ನು ವಿಶೇಷ ಆರ್ಥಿಕ ವಲಯಕ್ಕಾಗಿ ಕರ್ನಾಟಕ ಕೈಗಾರಿಕಾ ಮಂಡಳಿಯು ವಶಪಡಿಸಿಕೊಂಡು ಅವೈಜ್ಞಾನಿಕವಾಗಿ ಅಭಿವೃದ್ಧಿ ಪಡಿಸುತ್ತಿರುವುದರಿಂದ ರೈತರುಗಳು ತಮ್ಮ ತೋಟಗಳಿಗೆ ಓಡಾಡಲು ತೊಂದರೆ ಅನುಭವಿಸುತ್ತಿರುವ ಹಿನ್ನಲೆಯಲ್ಲಿ ಸದರಿ ಯೋಜನೆಯನ್ನು ಪುನಃ ಪರಿಶೀಲಿಸಿ ರಸ್ತೆ ನಿರ್ಮಿಸುವ ಮೂಲಕ ರೈತರುಗಳಿಗೆ ಅನುಕೂಲ ಮಾಡಿಕೊಡುವ ವಿಷಯದ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

೦2. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಉತ್ತರ ತಾಲ್ಲೂಕಿನ ಚಾಗಲಟ್ಟಿ ಗ್ರಾಮದ ಕೆರೆಯ ಮಧ್ಯಭಾಗದಲ್ಲಿ ಕೆಲವು ಭೂಗಳ್ಳರು ರಸ್ತೆಯನ್ನು ನಿರ್ಮಿಸಿ ಕೆರೆಯ ಸ್ವರೂಪವನ್ನು ವಿರೂಪಗೊಳಿಸಿ ಭೂಕಬಳಿಕೆ ಮಾಡಿರುವ ಗಂಭೀರ ವಿಷಯದ ಕುರಿತು ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವರ ಗಮನ ಸೆಳೆಯುವುದು.

೦3. **ಶ್ರೀಮತಿ ವೀಣಾ ಅಚ್ಚಯ್ಯ** ಅವರು ಪ್ರಾಕೃತಿಕ ವಿಕೋಪದಿಂದ ಕಾಫಿ ಬೆಳೆಗೆ ಆಗುತ್ತಿರುವ ನಷ್ಟಕ್ಕೆ ನ್ಯಾಯಸಮ್ಮತ ಪರಿಹಾರ ದೊರೆಯದೆ ಇರುವ ಕಾರಣ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಎಸ್.ಎಲ್ ಭೋಜೇಗೌಡ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು ಅನುದಾನ ಮತ್ತು ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣ ಮಾಡುವ ಸಂಬಂಧ ಇಲಾಖೆಯಿಂದ ರೂಪಿಸಿರುವ ನಿಯಾಮವಳಿಗಳ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಸಿ.ಎಂ. ಇಬ್ರಾಹಿಂ** ಅವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಕಾಮಗಾರಿಗಳ ಮೊತ್ತದ ಶೇಕಡ 40ರಷ್ಟು ಮೊತ್ತ ಲಂಚದ ರೂಪದಲ್ಲಿ ವ್ಯಯವಾಗುತ್ತಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

..೩..

೦೩. **ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು 2004ರಲ್ಲಿ ನಿರ್ಮಾಣಗೊಂಡಿರುವ ಕೇಂದ್ರ ಕಛೇರಿಯ ಆವರಣದಲ್ಲಿರುವ ಕಟ್ಟಡಗಳನ್ನು ಕೆಡವಿ ಬಹುಮಹಡಿಯ **"ಬಿ.ಡಿ.ಎ. ಅಭಿವೃದ್ಧಿ ಭವನ"**ವನ್ನು ನಿರ್ಮಾಣ ಮಾಡುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು.

೦೪. **ಶ್ರೀ ಅರುಣ ಶಹಾಪೂರ ಮತ್ತು ಶ್ರೀ ಪುಟ್ಟಣ್ಣ** ಅವರುಗಳು 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಠಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**